ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 1825
ಸದಸ್ಯರ ಹೆಸರು	: ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ	: 15-03-2022
ಉತ್ತರಿಸುವ ಸಚಿವರು	: ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
ಅ	ರಾಜ್ಯ ಸರ್ಕಾರವು ಪೋಷಣಾ ಅಭಿಯಾನದಡಿ ತಾಯಂದಿರು ಹಾಗೂ ಶಿಶುವಿನ ಪೌಷ್ಠಿಕ ಆಹಾರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಪೋಷಣಾ ಅಭಿಯಾನ ಯೋಜನೆಯಡಿ ತಾಯಂದಿರು ಹಾಗೂ ಶಿಶುವಿನ ಅಭಿವೃದ್ಧಿಗಾಗಿ ಗುರಿ ಮತ್ತು ಉದ್ದೇಶಗಳು ಈ ಕೆಳಗಿನಂತಿವೆ. • 0-6 ವರ್ಷದ ಮಕ್ಕಳಲ್ಲಿನ ಕುಂಠಿತ ಬೆಳವಣಿಗೆಯನ್ನು ತಡೆಗಟ್ಟುವಿಕೆ. • 0-6 ವರ್ಷದ ಮಕ್ಕಳ ಅಪೌಷ್ಠಿಕತೆಯನ್ನು ತಡೆಗಟ್ಟುವಿಕೆ ಮತ್ತು ರಕ್ತಹೀನತೆಯ ಪ್ರಮಾಣವನ್ನು ಕಡಿಮೆಗೊಳಿಸುವುದು. • 15-49 ವಯಸ್ಸಿನ ಹದಿಹರೆಯದ ಹೆಣ್ಣು ಮಕ್ಕಳಲ್ಲಿ ಮತ್ತು ಮಹಿಳೆಯರಲ್ಲಿ ರಕ್ತಹೀನತೆಯನ್ನು ತಡೆಗಟ್ಟುವುದು. • ಕಡಿಮೆ ತೂಕವುಳ್ಳ ಮಕ್ಕಳ ಜನನ ಪ್ರಮಾಣದ ನಿಯಂತ್ರಣ. • ಸದರಿ ಉದ್ದೇಶಗಳನ್ನು ಅನುಷ್ಠಾನಗೊಳಿಸಲು ಈ ಯೋಜನೆಯಡಿ ಸಮುದಾಯ ಆಧಾರಿತ ಅರಿವು ಕಾರ್ಯಕ್ರಮಗಳಿಂದ ಪೌಷ್ಠಿಕ ಆಹಾರ ಸೇವನೆಯ ಪ್ರಾಮುಖ್ಯತೆ ಮತ್ತು ಮಗುವಿನ 1000 ದಿನಗಳ ಆರೈಕೆಯ ಮಾಹಿತಿಯನ್ನು ಒದಗಿಸಲಾಗುತ್ತಿದೆ. ಪೋಷಣಾ ಅಭಿಯಾನ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಈ ಕೆಳಕಂಡ ಕಾರ್ಯಕ್ರಮ ಮತ್ತು ಚಟುವಟಿಕೆಗಳನ್ನು ಕೈಗೊಳ್ಳಲಾಗಿರುತ್ತದೆ. ರಾಜ್ಯದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕಿಯರಿಗೆ ಸ್ಮಾರ್ಟ್ ಫೋನ್‌ಗಳನ್ನು ವಿತರಿಸಲಾಗಿದ್ದು, ಸದರಿ ಸ್ಮಾರ್ಟ್ ಫೋನ್‌ಗಳಲ್ಲಿನ ಪೋಷಣ್ ಟ್ರ್ಯಾಕರ್ ಅಪ್ಲಿಕೇಶನ್ ಮೂಲಕ ಅಂಗನವಾಡಿ ಕೇಂದ್ರಗಳ ಎಲ್ಲಾ ಫಲಾನುಭವಿಗಳ ವಿವರಗಳನ್ನು ದಾಖಲಿಸಲಾಗುತ್ತದೆ. ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ Infant and Mother Weighing Scale, Infantometer and Stadiometer ಗಳನ್ನು ಒದಗಿಸಲಾಗಿದ್ದು ಸದರಿ ಸಾಧನಗಳ ಮೂಲಕ ಗರ್ಭಿಣಿ, ಬಾಣಂತಿಯರು ಮತ್ತು ಮಕ್ಕಳ ತೂಕ ಮತ್ತು ಎತ್ತರವನ್ನು ಅಳೆದು ಪೌಷ್ಠಿಕದ ಮಟ್ಟವನ್ನು ಗುರುತಿಸಲಾಗುತ್ತದೆ. ಪ್ರತಿವರ್ಷ ಜನಾಂದೋಲನ ಚಟುವಟಿಕೆಗಳನ್ನು ಸೆಪ್ಟೆಂಬರ್ ತಿಂಗಳಲ್ಲಿ ಪೋಷಣ್ ಮಾಸಾಚರಣೆ ಮತ್ತು ಮಾರ್ಚ್ ತಿಂಗಳಲ್ಲಿ ಪೋಷಣ್ ಪಕ್ವಾಡ್ ಕಾರ್ಯಕ್ರಮಗಳನ್ನು ಆಚರಿಸಲಾಗುತ್ತದೆ. ಈ ಕಾರ್ಯಕ್ರಮಗಳ ಮೂಲಕ ಜನರಲ್ಲಿ ಅಪೌಷ್ಠಿಕತೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

		ಪೋಷಣಾ ಅಭಿಯಾನ ಯೋಜನೆಯಡಿ ರಾಜ್ಯದ ಎಲ್ಲಾ ಅಂಗನವಾಡಿಗಳಲ್ಲಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶುಕ್ರವಾರ ನಡೆಸಲಾಗುತ್ತದೆ.ಇದರ ಮೂಲಕ ತಾಯಂದಿಯರಿಗೆ ಅರಿವು ಮೂಡಿಸಲಾಗುತ್ತಿದೆ. ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.
ಆ.	ಪೋಷಣಾ ಅಭಿಯಾನಗಳಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಎಷ್ಟು ಸೀರೆಗಳನ್ನು ಖರೀದಿಸಲಾಗಿದೆ; ಖರೀದಿಸಲಾದ ಸೀರೆಗಳನ್ನು ವಿತರಿಸಲಾಗಿದೆಯೇ;	65911 ಅಂಗನವಾಡಿ ಕಾರ್ಯಕರ್ತೆಯರು ಮತ್ತು 62580 ಸಹಾಯಕಿಯರಿಗೆ ತಲಾ 2 ಸೀರೆಗಳಂತೆ ಒಟ್ಟು 256982 ಸೀರೆಗಳನ್ನು ಖರೀದಿಸಿ ವಿತರಿಸಲಾಗಿರುತ್ತದೆ.
ಇ.	ಸೀರೆ ಖರೀದಿಗೆ ಆಗಿರುವ ಮೊತ್ತ ಎಷ್ಟು; ಸೀರೆಯನ್ನು ಧರಿಸಲು ಅಂಗನವಾಡಿ ಕಾರ್ಯಕರ್ತರು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಒಂದು ಸೀರೆಗೆ ರೂ. 385.75/- ರಂತೆ ಸೀರೆ ಖರೀದಿಗೆ ಆಗಿರುವ ಒಟ್ಟು ಮೊತ್ತ ರೂ.9,91,30,806.50/- ಗಳಾಗಿರುತ್ತದೆ. ಪೋಷಣ್ ಅಭಿಯಾನ ಯೋಜನೆಯಡಿ ವಿತರಿಸಿರುವ ಸೀರೆಗಳಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ "ಪೋಷಣಾ ಅಭಿಯಾನ" ದ ಲೋಗೊವನ್ನು ಮುಂದ್ರಿಸಿರುವುದರಿಂದ ಸೀರೆಗಳನ್ನು ಧರಿಸಲು ಅಂಗನವಾಡಿ ಕಾರ್ಯಕರ್ತರು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ವಿವಿಧ ಸಂಘಗಳೊಂದಿಗೆ ಸಭೆ ನಡೆಸಿ ಸಮವಸ್ತ್ರದ ಕುರಿತಾಗಿ ಕೇಂದ್ರ ಸರ್ಕಾರವು ನೀಡಿರುವ ಮಾರ್ಗಸೂಚಿ ಮತ್ತು ಷರತ್ತುಗಳ ಬಗ್ಗೆ ಮನದಟ್ಟು ಮಾಡಲಾಗಿದೆ.

ಸಂ: ಮಮಇ 114 ಐಸಿಡಿ 2022

Halappa B.B

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.